ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ರಾಜ್ಯದಲ್ಲಿ ಹೊಸದಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ತೆರೆಯುವ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1447 (1685) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ದಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಈ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯಾನುಪಾತದ ಪ್ರಕಾರ ವಿದ್ಯಾರ್ಥಿಗಳನ್ನು ಭರ್ತಿ ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ಹೊಸದಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ತೆರೆಯಲು ರಾಜ್ಯದ ವಿವಿಧ ಜಿಲ್ಲೆಗಳಿಂದ ಬಂದಿರುವ ಪ್ರಸ್ತಾವನೆಗಳು ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು, ಸ್ಥಳವಾರು ಮಾಹಿತಿ ನೀಡುವುದು)

(ಈ) ಹಾಲಿ ಇರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಗಣನೀಯವಾಗಿ ಕಡಿಮೆಯಾಗುತ್ತಿರುವ ಕಾಲೇಜುಗಳನ್ನು ಗುರುತಿಸಿ, ಅಂತಹ ಕಾಲೇಜುಗಳನ್ನು ಬೇಡಿಕೆ ಇರುವ ಸ್ಥಳಗಳಿಗೆ ಸ್ಥಳಾಂತರಿಸಲು ಸರ್ಕಾರ ಕ್ರಮ ತೆಗೆದುಕೊಂಡಿದೆಯೇ ; (ವಿವರ ನೀಡುವುದು)

(ಉ) ಹಾಗಿದ್ದಲ್ಲಿ, ಅಂತಹ ಕಾಲೇಜುಗಳ ಸಂಖ್ಯೆ ಎಷ್ಟು ;

(ಊ) ವಿವಿಧ ಜಿಲ್ಲೆಗಳಿಂದ ಹೊಸದಾಗಿ ಪ್ರಥಮ ದರ್ಜೆ ಕಾಲೇಜುಗಳನ್ನು ತೆರೆಯಲು ಬಂದಿರುವ ಪ್ರಸ್ತಾವನೆಗಳಿಗೆ ಬೇಡಿಕೆ ಇರುವ ಕಡೆ ಹೊಸದಾಗಿ ಕಾಲೇಜುಗಳನ್ನು ತೆರೆಯಲಾಗುವುದೇ ?